ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು 560001.**

ಸಂಖ್ಯೆ:ಸಿ7(8) ಆರ್.ಟಿ.ಇ/ಶು.ಮ/ತಂ.ಬಿ/2021-22 ದಿನಾಂಕ:17.06.2022

**::ಸುತ್ತೋಲೆ::**

ವಿಷಯ: 2021-22ನೇ ಸಾಲಿನ ಆರ್.ಟಿ.ಇ ಶುಲ್ಕ ಮರುಪಾವತಿಗೆ ತಂತ್ರಾಂಶದ ಮೂಲಕ ಬೇಡಿಕೆ ಸಲ್ಲಿಸಲು ಅಂತಿಮ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ:1) ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ 2009

2) ಕರ್ನಾಟಕ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು 2012

3) ಸರ್ಕಾರದ ಆದೇಶ ಸಂಖ್ಯೆ:ಇಪಿ 50 ಎಂ.ಹೆಚ್.ಟಿ 2021 ದಿನಾಂಕ:29.10.2021

4) ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ7(8)/ಆರ್.ಟಿ.ಇ//ಡೈಸ್ ವಿಲೀನ/2019-20, ದಿನಾಂಕ:14.06.2019

5) ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ7(8)/ಆರ್.ಟಿ.ಇ/ಎ.ಜಿ ಆಡಿಟ್ 2015-16/2019-20 ದಿನಾಂಕ:29.05.2020 ಮತ್ತು 27.07.2020

6) ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:16.11.2021,19.01.2022, 18.02.2022, 15.03.2022, 18.04.2022 ಮತ್ತು 18.05.2022.

* * * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ ಶಿಕ್ಷಣ ಹಕ್ಕು ಕಾಯ್ದೆ 2009ರ ಸೆಕ್ಷನ್12(1)(ಸಿ)ರಡಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ 2021-22ನೇ ಸಾಲಿನ ಶುಲ್ಕ ಮರುಪಾವತಿಗೆ ಶಾಲೆಗಳು ಆನ್‌ಲೈನ್ ಮೂಲಕ ಬೇಡಿಕೆ ಸಲ್ಲಿಸಲು ಅಂತಿಮ ದಿನಾಂಕವನ್ನು 15.07.2022ರವರೆಗೆ ವಿಸ್ತರಿಸಿ ಆದೇಶಿಸಿದೆ. ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಈ ಕುರಿತು ವೈಯಕ್ತಿಕ ಗಮನಹರಿಸಿ ವ್ಯಾಪಕ ಪ್ರಚಾರ ನೀಡಿ, ಖಾಸಗಿ ಅನುದಾನ ರಹಿತ ಶಾಲೆಗಳು ಶುಲ್ಕ ಮರುಪಾವತಿ ಬೇಡಿಕೆ ಸಲ್ಲಿಸಲು ಅಗತ್ಯ ಕ್ರಮವಹಿಸುವುದು.

[ಮಾನ್ಯ ಆಯುಕ್ತರ ಆದೇಶದ ಮೇರೆಗೆ]

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಇವರಿಗೆ,

1) ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2) ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
3) ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
4) ರಾಜ್ಯದ ಎಲ್ಲಾ ತಾಲ್ಲೂಕು/ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
5) ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
6) ಹಿರಿಯ ಸಹಾಯಕ ನಿರ್ದೇಶಕರು, ಎಸ್.ಎ.ಟಿ.ಎಸ್ ವಿಭಾಗ, ಸಮಗ್ರ ಶಿಕ್ಷಣ ಕರ್ನಾಟಕ, ಇವರಿಗೆ ಸೂಕ್ತ ಕ್ರಮಕ್ಕಾಗಿ.
7) ಸಂಬಂಧಿಸಿದ ಖಾಸಗಿ ಅನುದಾನರಹಿತ ಶಾಲೆಗಳ ಮುಖ್ಯಸ್ಥರು/ಕಾರ್ಯದರ್ಶಿಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೂಲಕ ಕ್ರಮಕ್ಕಾಗಿ
8) ಕಛೇರಿ ಪ್ರತಿ.